**A**

**CCE RF**
**REVISED**

**ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಮಲ್ಲೇಶ್ವರಂ, ಬೆಂಗಳೂರು – 560 003**

**KARNATAKA SECONDARY EDUCATION EXAMINATION BOARD, MALLESWARAM, BANGALORE – 560 003**

**ಎಸ್.ಎಸ್.ಎಲ್.ಸಿ. ಪರೀಕ್ಷೆ, ಮಾರ್ಚ್ / ಏಪ್ರಿಲ್, 2019**

**S.S.L.C. EXAMINATION, MARCH / APRIL, 2019**

**ಮಾದರಿ ಉತ್ತರಗಳು**

**MODEL ANSWERS**

ದಿನಾಂಕ : 02. 04. 2019 ] **ಸಂಕೇತ ಸಂಖ್ಯೆ : 83-K (Bio.)**

Date : 02. 04. 2019 ] **CODE No. : 83-K (Bio.)**

# ವಿಷಯ : ವಿಜ್ಞಾನ

# Subject : SCIENCE

**(ಜೀವಶಾಸ್ತ್ರ / Biology)**


**(ಹೊಸ ಪಠ್ಯಕ್ರಮ / New Syllabus)**

**(ಶಾಲಾ ಅಭ್ಯರ್ಥಿ / Regular Fresh)**

**(ಕನ್ನಡ ಭಾಷಾಂತರ / Kannada Version)**

**[ ಗರಿಷ್ಠ ಅಂಕಗಳು : 80**

**[ Max. Marks : 80**

| ಪ್ರಶ್ನೆ ಸಂಖ್ಯೆ | ಪ್ರಶ್ನಾನುಸಾರ ಮೌಲ್ಯಮಾಪನ | ಅಂಕಗಳು |
|---|---|---|
| 3. | ಕೆಳಗೆ ಕೊಟ್ಟಿರುವ ಚಿತ್ರದಲ್ಲಿ ನರ ಆವೇಗಗಳು ಹಾದುಹೋಗುವ ಸರಿಯಾದ ಮಾರ್ಗ   (A) $Q \rightarrow S \rightarrow R \rightarrow P$<br>(B) $P \rightarrow Q \rightarrow R \rightarrow S$<br>(C) $S \rightarrow R \rightarrow Q \rightarrow P$<br>(D) $P \rightarrow R \rightarrow S \rightarrow Q$<br>***ಉತ್ತರ :*** (D) $P \rightarrow R \rightarrow S \rightarrow Q$ | 1 |

| ಪ್ರಶ್ನೆ ಸಂಖ್ಯೆ | ಪ್ರಶ್ನಾನುಸಾರ ಮೌಲ್ಯಮಾಪನ | ಅಂಕಗಳು |
|---|---|---|
| 6. | ಸಮತಟ್ಟಾದ ಭೂಪ್ರದೇಶಗಳಲ್ಲಿ ಖಾದಿನ್ ಒಡ್ಡುಗಳನ್ನು ನಿರ್ಮಿಸುವುದರಿಂದ<br>(A) ಅಂತರ್ಜಲದ ಮಟ್ಟವು ಕಡಿಮೆಯಾಗುತ್ತದೆ<br>(B) ಅಂತರ್ಜಲದ ಮಟ್ಟವು ಹೆಚ್ಚಾಗುತ್ತದೆ<br>(C) ಸಮೀಪ ಪ್ರದೇಶದ ಸಸ್ಯಗಳು ಅಧಿಕ ತೇವಾಂಶದಿಂದ ನಶಿಸುತ್ತವೆ<br>(D) ಅಂತರ್ಜಲವು ಮಲಿನವಾಗುತ್ತದೆ<br>***ಉತ್ತರ :*** (B) ಅಂತರ್ಜಲದ ಮಟ್ಟವು ಹೆಚ್ಚಾಗುತ್ತದೆ | 1 |
| 9. | ಹಣ್ಣಾಗಿ ಬೆಳೆಯುವ ಹೂವಿನ ಭಾಗ ಮತ್ತು ಸಸ್ಯದ ಬೇರಾಗಿ ಬೆಳೆಯುವ ಬೀಜದ ಭಾಗ ಕ್ರಮವಾಗಿ<br>(A) ಅಂಡಾಶಯ ಮತ್ತು ಪ್ರಥಮ ಕಾಂಡ<br>(B) ಪ್ರಥಮ ಕಾಂಡ ಮತ್ತು ಪ್ರಥಮ ಮೂಲ<br>(C) ಅಂಡಾಶಯ ಮತ್ತು ಪ್ರಥಮ ಮೂಲ<br>(D) ಅಂಡಾಶಯ ಮತ್ತು ಅಂಡಾಣು<br>***ಉತ್ತರ :*** (C) ಅಂಡಾಶಯ ಮತ್ತು ಪ್ರಥಮ ಮೂಲ | 1 |
| 10. | ಪ್ರಬಲ ಗುಣವಾದ ದುಂಡಗಿನ ಹಳದಿ ಬೀಜಗಳನ್ನು ಉತ್ಪಾದಿಸುವ ಶುದ್ಧ ಬಟಾಣಿ ಸಸ್ಯವನ್ನು ದುರ್ಬಲ ಗುಣವಾದ ಸುಕ್ಕಾದ–ಹಸಿರು ಬೀಜಗಳನ್ನು ಉತ್ಪಾದಿಸುವ ಶುದ್ಧ ಬಟಾಣಿ ಸಸ್ಯದೊಂದಿಗೆ ಸಂಕರಗೊಳಿಸಿದೆ. ಮೆಂಡಲ್‌ರ ಪ್ರಯೋಗದ $F_1$ ಪೀಳಿಗೆಯಲ್ಲಿ ದುಂಡಗಿನ–ಹಸಿರು ಬೀಜಗಳನ್ನು ಹೊಂದಿರುವ ಸಸ್ಯಗಳ ಸಂಖ್ಯೆ<br>(A) 0 (B) 1<br>(C) 3 (D) 9<br>***ಉತ್ತರ :*** (A) 0 | 1 |

| ಪ್ರಶ್ನೆ ಸಂಖ್ಯೆ | ಪ್ರಶ್ನಾನುಸಾರ ಮೌಲ್ಯಮಾಪನ | ಅಂಕಗಳು |
|---|---|---|
| 11. | ***A*-ಪಟ್ಟಿಯಲ್ಲಿ ಹಾರ್ಮೋನುಗಳ ಕಾರ್ಯಗಳನ್ನು ಮತ್ತು *B*-ಪಟ್ಟಿಯಲ್ಲಿ ಹಾರ್ಮೋನುಗಳ ಹೆಸರುಗಳನ್ನು ನೀಡಲಾಗಿದೆ. ಅವುಗಳನ್ನು ಹೊಂದಿಸಿ ಮತ್ತು ಉತ್ತರಗಳನ್ನು ಕ್ರಮಾಕ್ಷರದೊಂದಿಗೆ ಬರೆಯಿರಿ.** $4 \times 1 = 4$ | |


| *A ಪಟ್ಟಿ* | *B ಪಟ್ಟಿ* |
|---|---|
| (A) ದೇಹವು ಪರಿಸ್ಥಿತಿಯನ್ನು ಎದುರಿಸಲು ಸಿದ್ಧವಾಗುವಂತೆ ಮಾಡುತ್ತದೆ | (i) ಬೆಳವಣಿಗೆ ಹಾರ್ಮೋನು |
| (B) ದೇಹದ ಬೆಳವಣಿಗೆಗಾಗಿ ಚಯಾಪಚಯ ಕ್ರಿಯೆಯನ್ನು ನಿಯಂತ್ರಿಸುತ್ತದೆ | (ii) ಟೆಸ್ಟೋಸ್ಟಿರಾನ್ |
| (C) ರಕ್ತದ ಸಕ್ಕರೆಯ ಮಟ್ಟವನ್ನು ನಿಯಂತ್ರಿಸುತ್ತದೆ | (iii) ಅಡ್ರಿನಲಿನ್ |
| (D) ದೇಹದ ಬೆಳವಣಿಗೆ ಮತ್ತು ಅಭಿವೃದ್ಧಿಯನ್ನು ನಿಯಂತ್ರಿಸುತ್ತದೆ | (iv) ಪ್ರೊಜೆಸ್ಟಿರಾನ್ |
| | (v) ಇನ್ಸುಲಿನ್ |
| | (vi) ಥೈರಾಕ್ಸಿನ್ |
| | (vii) ಈಸ್ಟ್ರೋಜನ್ |

*ಉತ್ತರ :*

| *A ಪಟ್ಟಿ* | *B ಪಟ್ಟಿ* | | |
|---|---|---|---|
| (A) ದೇಹವು ಪರಿಸ್ಥಿತಿಯನ್ನು ಎದುರಿಸಲು ಸಿದ್ಧವಾಗುವಂತೆ ಮಾಡುತ್ತದೆ | (iii) ಅಡ್ರಿನಲಿನ್ | 1 | |
| (B) ದೇಹದ ಬೆಳವಣಿಗೆಗಾಗಿ ಚಯಾಪಚಯ ಕ್ರಿಯೆಯನ್ನು ನಿಯಂತ್ರಿಸುತ್ತದೆ | (vi) ಥೈರಾಕ್ಸಿನ್ | 1 | |
| (C) ರಕ್ತದ ಸಕ್ಕರೆಯ ಮಟ್ಟವನ್ನು ನಿಯಂತ್ರಿಸುತ್ತದೆ | (v) ಇನ್ಸುಲಿನ್ | 1 | |
| (D) ದೇಹದ ಬೆಳವಣಿಗೆ ಮತ್ತು ಅಭಿವೃದ್ಧಿಯನ್ನು ನಿಯಂತ್ರಿಸುತ್ತದೆ | (i) ಬೆಳವಣಿಗೆ ಹಾರ್ಮೋನು | 1 | 4 |

| ಪ್ರಶ್ನೆ ಸಂಖ್ಯೆ | ಪ್ರಶ್ನಾನುಸಾರ ಮೌಲ್ಯಮಾಪನ | | ಅಂಕಗಳು |
|---|---|---|---|
| 13. | ಪಳೆಯುಳಿಕೆಗಳು ಎಂದರೇನು ? | | |
| | ***ಉತ್ತರ :*** | | |
| | ಅಳಿದುಹೋದ ಪ್ರಭೇದಗಳ ಸಂರಕ್ಷಿಸಲ್ಪಟ್ಟ ಅವಶೇಷಗಳನ್ನು ಪಳೆಯುಳಿಕೆಗಳು ಎನ್ನುವರು. | | 1 |
| 18. | ಸ್ನಾಯುಕೋಶಗಳಲ್ಲಿ ಲ್ಯಾಕ್ಟಿಕ್ ಆಮ್ಲವು ಯಾವ ಸಂದರ್ಭದಲ್ಲಿ ಉತ್ಪತ್ತಿಯಾಗುತ್ತದೆ ? | | |
| | ***ಉತ್ತರ :*** | | |
| | ಸ್ನಾಯು ಕೋಶಗಳಲ್ಲಿ ಆಕ್ಸಿಜನ್ ಕೊರತೆಯಿದ್ದಾಗ ಲ್ಯಾಕ್ಟಿಕ್ ಆಮ್ಲವು ಉತ್ಪತ್ತಿಯಾಗುತ್ತದೆ. | | 1 |
| 21. | ಸಸ್ಯಗಳಲ್ಲಿ ಆಹಾರವಸ್ತುಗಳ ಸ್ಥಾನಾಂತರಣ ಕ್ರಿಯೆಯನ್ನು ವಿವರಿಸಿ. | | |
| | ***ಅಥವಾ*** | | |
| | ಮಾನವನ ಸಣ್ಣ ಕರುಳಿನಲ್ಲಿ ನಡೆಯುವ ಜೀರ್ಣಕ್ರಿಯೆಯನ್ನು ವಿವರಿಸಿ. | | |
| | ***ಉತ್ತರ :*** | | |
| | *ಸಸ್ಯಗಳಲ್ಲಿ ಆಹಾರವಸ್ತುಗಳ ಸ್ಥಾನಾಂತರಣ ಕ್ರಿಯೆ :* | | |
| | ★ ಆಹಾರ ವಸ್ತುಗಳ ಸ್ಥಾನಾಂತರಣಕ್ರಿಯೆಯು ಸಸ್ಯಗಳ ಫ್ಲೋಯಂ ಅಂಗಾಂಶದಲ್ಲಿ ಜರುಗುತ್ತದೆ. | ½ | |
| | ★ ಈ ಕ್ರಿಯೆಯು, ಜರಡಿನಾಳ ಮತ್ತು ಪಾರ್ಶ್ವ ಸಂಗಾತಿ ಜೀವಕೋಶಗಳ ಸಹಾಯದಿಂದ ಮೇಲ್ಮುಖ ಹಾಗೂ ಕೆಳಮುಖ ದಿಕ್ಕುಗಳಲ್ಲಿ ನಡೆಯುತ್ತದೆ. | 1 | |
| | ★ ಅಭಿಸರಣ ಒತ್ತಡದಿಂದ ಈ ಕ್ರಿಯೆಯನ್ನು ಸಾಧಿಸಲಾಗುತ್ತದೆ. | ½ | 2 |
| | ***ಅಥವಾ*** | | |

| ಪ್ರಶ್ನೆ ಸಂಖ್ಯೆ | ಪ್ರಶ್ನಾನುಸಾರ ಮೌಲ್ಯಮಾಪನ | ಅಂಕಗಳು |
|---|---|---|
| | *ಮಾನವನ ಸಣ್ಣ ಕರುಳಿನಲ್ಲಿ ನಡೆಯುವ ಜೀರ್ಣಕ್ರಿಯೆ :* | |
| | ★ ಸಣ್ಣ ಕರುಳು ಪ್ರೋಟೀನ್‌ಗಳು, ಕಾರ್ಬೋಹೈಡ್ರೇಟ್‌ಗಳು ಮತ್ತು ಕೊಬ್ಬುಗಳು ಸಂಪೂರ್ಣವಾಗಿ ಪಚನವಾಗುವ ಸ್ಥಳವಾಗಿದೆ. ½ | |
| | ★ ಸಣ್ಣ ಕರುಳಿನ ಭಿತ್ತಿಯಲ್ಲಿ ಕಂಡುಬರುವ ಗ್ರಂಥಿಗಳು ಕರುಳಿನ ರಸವನ್ನು ಸ್ರವಿಸುತ್ತವೆ. ½ | |
| | ★ ಇಲ್ಲಿರುವ ಕಿಣ್ವಗಳು ಪ್ರೋಟೀನನ್ನು ಅಮೈನೋ ಆಮ್ಲಗಳಾಗಿ, ಸಂಕೀರ್ಣ ಕಾರ್ಬೋಹೈಡ್ರೇಟ್‌ಗಳನ್ನು ಗ್ಲೂಕೋಸ್ ಆಗಿ ಹಾಗೂ ಕೊಬ್ಬುಗಳನ್ನು ಕೊಬ್ಬಿನ ಆಮ್ಲ ಮತ್ತು ಗ್ಲಿಸರಾಲ್ ಆಗಿ ಪರಿವರ್ತಿಸುತ್ತವೆ. ½ | |
| | ★ ಜೀರ್ಣವಾದ ಆಹಾರವು ಸಣ್ಣ ಕರುಳಿನಲ್ಲಿರುವ ವಿಲ್ಲೈಗಳಿಂದ ಹೀರಿಕೆಯಾಗುತ್ತದೆ. ½ | 2 |
| 24. | ಹೂವಿನ ನೀಳಛೇದ ನೋಟವನ್ನು ತೋರಿಸುವ ಚಿತ್ರವನ್ನು ಬರೆಯಿರಿ. ಕೆಳಗಿನ ಭಾಗಗಳನ್ನು ಗುರುತಿಸಿ :<br>(i) ಶಲಾಕ ನಳಿಕೆ (ii) ಪರಾಗ ಕೋಶ<br>***ಉತ್ತರ :*** | |




ಹೂವಿನ ನೀಳಛೇದ ಭಾಗ 1 + ½ + ½ — 2

| ಪ್ರಶ್ನೆ ಸಂಖ್ಯೆ | ಪ್ರಶ್ನಾನುಸಾರ ಮೌಲ್ಯಮಾಪನ | | ಅಂಕಗಳು |
|---|---|---|---|
| 27. | ಫಾಸಿಲ್ ಇಂಧನಗಳ ಬಳಕೆಯಿಂದ ಆಗುವ ಅನನುಕೂಲಗಳನ್ನು ಪಟ್ಟಿಮಾಡಿ. | | |
| | **ಅಥವಾ** | | |
| | ಪರಿಸರದ ರಕ್ಷಣೆಯಲ್ಲಿ 'ಮಿತಬಳಕೆ' ಮತ್ತು 'ಮರುಬಳಕೆ'ಗಳಿಂದಾಗುವ ಅನುಕೂಲಗಳನ್ನು ಪಟ್ಟಿಮಾಡಿ. | | |
| | ***ಉತ್ತರ :*** | | |
| | *ಫಾಸಿಲ್ ಇಂಧನಗಳ ಬಳಕೆಯಿಂದ ಆಗುವ ಅನಾನುಕೂಲಗಳು :* | | |
| | ★ ಫಾಸಿಲ್ ಇಂಧನಗಳು ಜೈವಿಕ ರಾಶಿಯಿಂದ ರೂಪುಗೊಂಡಿದ್ದು ಕಾರ್ಬನ್, ಹೈಡ್ರೋಜನ್, ನೈಟ್ರೋಜನ್ ಮತ್ತು ಸಲ್ಫರ್‌ಗಳನ್ನು ಒಳಗೊಂಡಿದೆ. | ½ | |
| | ★ ಇವುಗಳನ್ನು ಉರಿಸಿದಾಗ ಕಾರ್ಬನ್‌ನ ಆಕ್ಸೈಡ್‌ಗಳು, ನೀರು, ನೈಟ್ರೋಜನ್‌ನ ಆಕ್ಸೈಡ್‌ಗಳು ಮತ್ತು ಸಲ್ಫರ್‌ನ ಆಕ್ಸೈಡ್‌ಗಳು ಉತ್ಪತ್ತಿಯಾಗುತ್ತದೆ. | ½ | |
| | ★ ನೈಟ್ರೋಜನ್ ಆಕ್ಸೈಡ್‌ಗಳು, ಸಲ್ಫರ್‌ನ ಆಕ್ಸೈಡ್‌ಗಳು, ಮತ್ತು ಕಾರ್ಬನ್ ಮಾನಾಕ್ಸೈಡ್‌ಗಳು ಅಧಿಕ ಸಾರತೆಯಲ್ಲಿ ವಿಷಕಾರಿಯಾಗಿವೆ. ಆಮ್ಲಮಳೆಗೆ ಕಾರಣವಾಗುತ್ತವೆ. | ½ | |
| | ★ ಕಾರ್ಬನ್ ಡೈಆಕ್ಸೈಡ್ ಒಂದು ಹಸಿರುಮನೆ ಅನಿಲ ವಾತಾವರಣದಲ್ಲಿ ಇದರ ಸಾರತೆಯು ಹೆಚ್ಚಿದಾಗ ತೀವ್ರವಾದ ಜಾಗತಿಕ ತಾಪಮಾನದ ಏರಿಕೆಗೆ ಕಾರಣವಾಗುತ್ತದೆ. | ½ | 2 |
| | **ಅಥವಾ** | | |
| | *ಪರಿಸರದ ರಕ್ಷಣೆಯಲ್ಲಿ 'ಮಿತಬಳಕೆ' ಮತ್ತು 'ಮರುಬಳಕೆ'ಗಳಿಂದಾಗುವ ಅನುಕೂಲಗಳು :* | | |
| | *ಮಿತಬಳಕೆ :* | | |
| | ಮಿತಬಳಕೆಯ ಅಭ್ಯಾಸದಿಂದ, | | |
| | (a) ವಿದ್ಯುಚ್ಛಕ್ತಿ | | |
| | (b) ನೀರು | | |
| | (c) ಆಹಾರ | | |
| | (d) ನೈಸರ್ಗಿಕ ಸಂಪನ್ಮೂಲಗಳು | | |
| | ಇವುಗಳನ್ನು ಸಂರಕ್ಷಿಸಬಹುದು. | ½ + ½ | |

| ಪ್ರಶ್ನೆ ಸಂಖ್ಯೆ | ಪ್ರಶ್ನಾನುಸಾರ ಮೌಲ್ಯಮಾಪನ | | ಅಂಕಗಳು |
|---|---|---|---|
| | *ಮರುಬಳಕೆ :* | | |
| | ಮರುಬಳಕೆಯ ಅಭ್ಯಾಸದಿಂದ, | | |
| | (a) ಪರಿಸರ ಮಾಲಿನ್ಯವನ್ನು ನಿಯಂತ್ರಿಸಬಹುದು | | |
| | (b) ತಕ್ಷಣದ ಬಳಕೆಗೆ ವಸ್ತುಗಳು ಲಭ್ಯವಿರುತ್ತವೆ | | |
| | (c) ಶಕ್ತಿಯ ರಕ್ಷಣೆಯಾಗುತ್ತದೆ | | |
| | (d) ಕಚ್ಚಾವಸ್ತುಗಳ ಬಳಕೆಯನ್ನು ಮಿತಗೊಳಿಸಬಹುದು | | |
| | (ಸಂಬಂಧಿಸಿದ ಇತರ ಅಂಶಗಳನ್ನು ಪರಿಗಣಿಸಿ) | ½ + ½ | 2 |
| 30. | ಕತ್ತರಿಸಿಟ್ಟ ಟೊಮ್ಯಾಟೋ ಹಣ್ಣಿನಲ್ಲಿ ನಾಲ್ಕು ದಿನಗಳ ನಂತರ ದಾರದಂತಹ ರಚನೆಗಳ ಬೆಳವಣಿಗೆಯೊಂದಿಗೆ ಕ್ರಮೇಣವಾಗಿ ಹಣ್ಣು ಕೊಳೆಯುವುದು ಕಂಡುಬರುತ್ತದೆ. ಈ ಬದಲಾವಣೆಗೆ ಕಾರಣಗಳನ್ನು ಸ್ಪಷ್ಟಪಡಿಸಿ. | | |
| | ***ಉತ್ತರ :*** | | |
| | ★ ಕತ್ತರಿಸಿಟ್ಟ ಟೊಮಟೋ ಹಣ್ಣಿನ ಮೇಲೆ ಬೆಳೆಯುವ ದಾರದಂತಹ ರಚನೆಗಳು ರೈಜೋಪಸ್ (ಬ್ರೆಡ್‌ಮೋಲ್ಡ್) ಎಂಬ ಶಿಲೀಂದ್ರದ ಹೈಫೇ. | ½ | |
| | ★ ಇವು ಚಿಕ್ಕ, ದುಂಡಗಿನ ರಚನೆಗಳಾದ ಬೀಜಕದಾನಿಗಳನ್ನು ಹೊಂದಿವೆ. | ½ | |
| | ★ ಬೀಜಕದಾನಿಗಳು ಸಂತಾನೋತ್ಪತ್ತಿಯ ರಚನೆಗಳಾದ ಬೀಜಕಗಳನ್ನು ಹೊಂದಿವೆ. | ½ | |
| | ★ ಈ ಬೀಜಕಗಳು ತೇವಾಂಶಯುಕ್ತ ಮೇಲ್ಮೈನ ಸಂಪರ್ಕಕ್ಕೆ ಬಂದು, ಬೆಳೆಯಲು ಪ್ರಾರಂಭಿಸುತ್ತವೆ. | ½ | 2 |
| | ಆದ್ದರಿಂದ ಟೊಮ್ಯಾಟೋ ಕ್ರಮೇಣ ಕೊಳೆಯಲು ಪ್ರಾರಂಭಿಸುತ್ತದೆ. | | |

| ಪ್ರಶ್ನೆ ಸಂಖ್ಯೆ | ಪ್ರಶ್ನಾನುಸಾರ ಮೌಲ್ಯಮಾಪನ | | ಅಂಕಗಳು |
|---|---|---|---|
| 33. | ಮಾಲಿನ್ಯಕ್ಕೆ ಒಳಪಟ್ಟ ಜಲಪರಿಸರ ವ್ಯವಸ್ಥೆಯಲ್ಲಿ ಕಂಡುಬರುವ ಆಹಾರ ಸರಪಳಿಯೊಂದನ್ನು ನೀಡಿದೆ. ಇದನ್ನು ವೀಕ್ಷಿಸಿ ಮತ್ತು ಕೆಳಗಿನ ಪ್ರಶ್ನೆಗಳಿಗೆ ಉತ್ತರಿಸಿ :<br><br>ಸಿಹಿನೀರು → ಶೈವಲಗಳು → ಮೀನುಗಳು → ಪಕ್ಷಿಗಳು<br><br>(i) ಜೈವಿಕ ಸಂವರ್ಧನೆಯಿಂದ ಹೆಚ್ಚು ತೊಂದರೆಗೆ ಒಳಗಾಗುವ ಜೀವಿಗಳು ಯಾವುವು ? ಏಕೆ ?<br><br>(ii) ಜೈವಿಕ ಸಂವರ್ಧನೆಯಿಂದ ಈ ಪರಿಸರ ವ್ಯವಸ್ಥೆಯು ಕ್ರಮೇಣವಾಗಿ ನಶಿಸಿಹೋಗುತ್ತದೆ. ಏಕೆ ?<br><br>***ಉತ್ತರ :*** | | |
| | (i) ★ ಜೈವಿಕ ಸಂವರ್ಧನೆಯಿಂದ ಹೆಚ್ಚು ತೊಂದರೆಗೆ ಒಳಗಾದ ಜೀವಿಗಳು,ಪಕ್ಷಿಗಳು. | ½ | |
| | ★ ನೀಡಿರುವ ಆಹಾರ ಸರಪಳಿಯಲ್ಲಿ ಪಕ್ಷಿಗಳು ಉನ್ನತಮಟ್ಟವನ್ನು ಆಕ್ರಮಿಸುವುದರಿಂದ ಜೈವಿಕ ಸಾಂದ್ರತಾವೃದ್ಧಿಗೆ ಕಾರಣವಾದ ರಾಸಾಯನಿಕಗಳು ಇವುಗಳ ದೇಹದಲ್ಲಿ ಗರಿಷ್ಠ ಸಾಂದ್ರತೆಯಲ್ಲಿ ಸಂಗ್ರಹವಾಗುತ್ತವೆ. | ½ | |
| | (ii) ★ ವಿಘಟನೆಗೆ ಒಳಗಾದ ರಾಸಾಯನಿಕಗಳು ಆಹಾರ ಸರಪಳಿಯ ವಿವಿಧ ಪೋಷಣಾಸ್ತರಗಳಲ್ಲಿ ಕ್ರಮೇಣ ಸಂಗ್ರಹವಾಗುತ್ತದೆ. | ½ | |
| | ★ ರಾಸಾಯನಿಕಗಳು ವಿಘಟನೆಗೆ ಒಳಪಡದೆ ಇರುವುದರಿಂದ ಹಾಗೂ ತೊಳೆದು ಹಾಕಲು ಸಾಧ್ಯವಿಲ್ಲದಿರುವುದರಿಂದ ಇವುಗಳನ್ನು ಆಹಾರ ಸರಪಳಿಯಿಂದ ತೆಗೆದುಹಾಕಲು ಸಾಧ್ಯವಿಲ್ಲ. ಇವುಗಳ ಅತಿ ಸಂಗ್ರಹದಿಂದ ಪರಿಸರ ವ್ಯವಸ್ಥೆಯು ಕ್ರಮೇಣ ನಶಿಸಿಹೋಗುತ್ತದೆ. | ½ | 2 |
| | ***ಅಥವಾ*** | | |

| ಪ್ರಶ್ನೆ ಸಂಖ್ಯೆ | ಪ್ರಶ್ನಾನುಸಾರ ಮೌಲ್ಯಮಾಪನ | | ಅಂಕಗಳು |
|---|---|---|---|
| | ★ ಸೌತೆಕಾಯಿಯ ಚೂರು ಮತ್ತು ಬಾಳೆಹಣಿನ ಸಿಪ್ಪೆ ಸಾವಯವ ವಸ್ತುಗಳು. | ½ | |
| | ★ ಇವು ಜೈವಿಕ ವಿಘಟನೆಗೆ ಒಳಪಡುತ್ತವೆ ಹಾಗೂ ಮಣ್ಣಿನೊಂದಿಗೆ ಸೇರಿಹೋಗುತ್ತವೆ. ಇವು ಪರಿಸರ ಸ್ನೇಹಿಯಾಗಿವೆ. | ½ | |
| | ★ ಗಾಜಿನ ಚೂರು ಮತ್ತು ಪ್ಲಾಸ್ಟಿಕ್ ಪೆನ್‌ಗಳು ನಿರವಯವ ವಸ್ತುಗಳು / ಸಂಶ್ಲೇಷಿತ ವಸ್ತುಗಳು. | ½ | |
| | ★ ಇವು ಜೈವಿಕ ವಿಘಟನೆಗೆ ಒಳಪಡುವುದಿಲ್ಲ. ಮಣ್ಣಿನಲ್ಲಿ ಮೂಲರೂಪದಲ್ಲಿಯೇ ಉಳಿದುಹೋಗುತ್ತವೆ ಹಾಗೂ ಮಾಲಿನ್ಯವನ್ನು ಉಂಟುಮಾಡುತ್ತವೆ. | ½ | 2 |
| 37. | ಮಾನವನ ಹೃದಯದ ನೀಳಛೇದ ನೋಟವನ್ನು ತೋರಿಸುವ ಚಿತ್ರವನ್ನು ಬರೆಯಿರಿ. ಕೆಳಗಿನ ಭಾಗಗಳನ್ನು ಗುರುತಿಸಿ :<br>(i) ಮಹಾ ಅಪಧಮನಿ<br>(ii) ಆಮ್ಲಜನಕರಹಿತ ರಕ್ತವನ್ನು ಸ್ವೀಕರಿಸುವ ಹೃದಯದ ಕೋಣೆ | | |

***ಉತ್ತರ :***




ಮಾನವನ ಹೃದಯದ ನೀಳಛೇದ ನೋಟ — 2 + ½ + ½ — 3

| ಪ್ರಶ್ನೆ ಸಂಖ್ಯೆ | ಪ್ರಶ್ನಾನುಸಾರ ಮೌಲ್ಯಮಾಪನ | ಅಂಕಗಳು |
|---|---|---|

42. (i) ರಚನಾನುರೂಪಿ ಅಂಗಗಳು ಮತ್ತು ಕಾರ್ಯಾನುರೂಪಿ ಅಂಗಗಳಿಗಿರುವ ವ್ಯತ್ಯಾಸಗಳನ್ನು ಬರೆಯಿರಿ.

(ii) ಪುರುಷನ ಲಿಂಗವರ್ಣತಂತುಗಳು ಮತ್ತು ಮಹಿಳೆಯ ಲಿಂಗವರ್ಣತಂತುಗಳಿಗಿರುವ ವ್ಯತ್ಯಾಸಗಳನ್ನು ಬರೆಯಿರಿ.

(iii) ತಂದೆಯಿಂದಲೇ ಮಗುವಿನ ಲಿಂಗ ನಿರ್ಧಾರವಾಗುತ್ತದೆ. ಹೇಗೆ ?

***ಉತ್ತರ :***

(i) *ರಚನಾನುರೂಪಿ ಅಂಗಗಳು ಮತ್ತು ಕಾರ್ಯಾನುರೂಪಿ ಅಂಗಗಳಿಗಿರುವ ವ್ಯತ್ಯಾಸಗಳು :*

| ***ರಚನಾನುರೂಪಿ ಅಂಗಗಳು*** | ***ಕಾರ್ಯಾನುರೂಪಿ ಅಂಗಗಳು*** |
|---|---|
| ⋆ ವಿಭಿನ್ನ ಜೀವಿಗಳ ಅಂಗಗಳು ಒಂದೇ ಮೂಲವನ್ನು ಹೊಂದಿರುತ್ತವೆ. | ⋆ ವಿಭಿನ್ನ ಜೀವಿಗಳ ಅಂಗಗಳು ಬೇರೆ ಬೇರೆ ಮೂಲವನ್ನು ಹೊಂದಿರುತ್ತವೆ. |
| ⋆ ಒಂದೇ ರೀತಿಯ ರಚನೆಯನ್ನು ಹೊಂದಿದ್ದು ಬೇರೆ ಬೇರೆ ಕಾರ್ಯ ನಿರ್ವಹಿಸುತ್ತದೆ. | ⋆ ಬೇರೆ ಬೇರೆ ರೀತಿಯ ರಚನೆ ಹೊಂದಿದ್ದು ಒಂದೇ ಕಾರ್ಯ ನಿರ್ವಹಿಸುತ್ತವೆ. |
| ⋆ *ಉದಾ. :* ಕಪ್ಪೆಯ ಮುಂಗಾಲುಗಳು, ಪಕ್ಷಿಯ ಮುಂಗಾಲುಗಳು | ⋆ *ಉದಾ. :* ಪಕ್ಷಿಯ ರೆಕ್ಕೆಗಳು ಮತ್ತು ಬಾವಲಿಯ ರೆಕ್ಕೆಗಳು. |

(ಯಾವುದೇ ಎರಡು ವ್ಯತ್ಯಾಸಗಳು) 1 + 1

| ಪ್ರಶ್ನೆ ಸಂಖ್ಯೆ | ಪ್ರಶ್ನಾನುಸಾರ ಮೌಲ್ಯಮಾಪನ | | ಅಂಕಗಳು |
|---|---|---|---|
| | (ii) ಮಹಿಳೆಯ ಲಿಂಗ ವರ್ಣತಂತುಗಳು ಪರಿಪೂರ್ಣ ಜೋಡಿಯನ್ನು ಹೊಂದಿದ್ದು, ಎರಡೂ $X$ ವರ್ಣತಂತುಗಳಾಗಿರುತ್ತದೆ. ಆದರೆ ಪುರುಷನ ಲಿಂಗ ವರ್ಣತಂತು ಜೋಡಿಯಲ್ಲಿ ಒಂದು ಸಾಮಾನ್ಯ ಗಾತ್ರದ $X$ ವರ್ಣತಂತು ಮತ್ತು ಇನ್ನೊಂದು ಚಿಕ್ಕದಾದ $Y$ ವರ್ಣತಂತು ಕಂಡುಬರುತ್ತದೆ. | 1 | |
| | (iii) ತಂದೆಯಿಂದ $X$ ವರ್ಣತಂತುವನ್ನು ಪಡೆದ ಮಗು ಹುಡುಗಿಯಾಗುತ್ತದೆ, ಹಾಗೂ $Y$ ವರ್ಣತಂತುವನ್ನು ಪಡೆದ ಮಗು ಹುಡುಗನಾಗುತ್ತಾನೆ. ಆದರೆ, ಹುಡುಗಿ ಮತ್ತು ಹುಡುಗ ಇಬ್ಬರೂ ತಾಯಿಯಿಂದ $X$ ವರ್ಣತಂತುವನ್ನು ಮಾತ್ರ ಪಡೆಯುತ್ತಾರೆ. ಆದ್ದರಿಂದ ತಂದೆಯಿಂದಲೇ ಮಗುವಿನ ಲಿಂಗ ನಿರ್ಧರಣೆಯಾಗುತ್ತದೆ. | 1 | 4 |